ಕರ್ನಾಟಕ ಸರ್ಕಾರ
ಅರಣ್ಯ ಇಲಾಖೆ

# ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ ರವರ ಕಛೇರಿ, ಬೆಳಗಾವಿ ವೃತ್ತ, ಬೆಳಗಾವಿ

**ಅಧಿಸೂಚನೆ ಸಂಖ್ಯೆ: ಎ2/ಇಎಸ್‌ಟಿ/ಅವೀನೇನೇ/ಸಿಆರ್-24/2023-24**
**ದಿನಾಂಕ: 15-09-2023 ರಂತೆ**

**2023-24ನೇ ಸಾಲಿನಲ್ಲಿ 20 ಅರಣ್ಯ ವೀಕ್ಷಕ ಗ್ರೂಪ್ 'ಡಿ' ವೃಂದದ ಹುದ್ದೆಗಳಿಗೆ ನೇರ ನೇಮಕಾತಿ**

## Corrigendum

ಸರ್ಕಾರದ ಅಧಿಸೂಚನೆಸಂಖ್ಯೆ: FEE 203 FEG 2015 ದಿನಾಂಕ: 06.08.2019ರ ಕರ್ನಾಟಕ ಅರಣ್ಯಇಲಾಖಾಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2019ರನ್ವಯ ಅರಣ್ಯ ವೀಕ್ಷಕ ವೃಂದಕ್ಕೆ ಸಂಬಂಧಿಸಿದಂತೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ/ ಅರಣ್ಯ ಸಂರಕ್ಷಣಾಧಿಕಾರಿಗಳು ಆಯ್ಕೆ ಪ್ರಾಧಿಕಾರವಾಗಿರುತ್ತಾರೆ.

ಅದರನ್ವಯ, ಬೆಳಗಾವಿ ವೃತ್ತಕ್ಕೆ ಸಂಬಂಧಿಸಿದಂತೆ ಅಧಿಸೂಚಿಸಲಾದ 20 ಅರಣ್ಯ ವೀಕ್ಷಕ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಈಗಾಗಲೇ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗಿರುತ್ತದೆ.

ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಅಧಿಸೂಚನೆಯಲ್ಲಿನ ಷರತ್ತುಗಳನ್ವಯ ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test], ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ [Physical Efficiency Test] ಹಾಗೂ ದೇಹ ದಾರ್ಢ್ಯತೆ ಪರೀಕ್ಷೆ [Physical Standard Test]ಗಳಿಗೆ ಮೆರಿಟ್ ಹಾಗೂ ನೇರ ಮತ್ತು ಸಮತಳ ಬಿಂದುಗಳ ಅನುಸಾರ **ಅರ್ಹತೆ ಪಡೆದ ಅಭ್ಯರ್ಥಿಗಳ 1:20 (ಹುದ್ದೆ:ಅಭ್ಯರ್ಥಿ) ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ಇಲಾಖೆಯ ಅಂತರ್ಜಾಲ https://aranya.gov.in/ ದಲ್ಲಿ ನೇಮಕಾತಿ (Recruitment) ಶೀರ್ಷಿಕೆಯಡಿ ಪ್ರಕಟಿಸಲಾಗಿದೆ** ಹಾಗೂ ಪ್ರತೀ ಪ್ರವರ್ಗದಲ್ಲಿ ತಾತ್ಕಾಲಿಕವಾಗಿ ಆಯ್ಕೆಯಾಗಿರುವ ಕೊನೆಯ ಅಭ್ಯರ್ಥಿಯು ಗಳಿಸಿರುವ ಅಂಕಗಳ ಶೇಕಡವಾರು ಮಾಹಿತಿಯ ವಿವರವನ್ನು ದಿನಾಂಕ: 22-02-2024 ರಂದು ಪರಿಷ್ಕೃತ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಅದರಲ್ಲಿ 2 ಅಭ್ಯರ್ಥಿಗಳು ಸಾಮಾನ್ಯ (ಇತರೆ) ಮತ್ತು ಸಾಮಾನ್ಯ (ಗ್ರಾಮೀಣ) ಹಾಗೂ 1 ಅಭ್ಯರ್ಥಿ ಸಾಮಾನ್ಯ (ಗ್ರಾಮೀಣ) ಹಾಗೂ ಪ್ರವರ್ಗ-1 ರಡಿಯಲ್ಲಿ ಪುನಾವರ್ತನೆ ಆಗಿರುವುದರಿಂದ, ಅದನ್ನು ಪರಿಶೀಲಿಸಿ ನಿಯಮಾನುಸಾರ ಸರಿಪಡಿಸಿ, ಈ ಕೆಳಗಿನ ಅಭ್ಯರ್ಥಿಗಳನ್ನು ಪ್ರವರ್ಗ-1 ರಡಿ ಮತ್ತು ಪರಿಶಿಷ್ಟ ಜಾತಿ ರಡಿಯಲ್ಲಿ ಪರಿಗಣಿಸಿ ಅಂತಿಮ ಪಟ್ಟಿಯಲ್ಲಿ ಸೇರಿಸಲಾಗಿದೆ.

| Sl.No. | Category | Name of shortlisted candidates in alphabetical order |
|---|---|---|
| 1 | ಪ್ರವರ್ಗ-1 | ABHILASH SHEKAPPA RAWAL |
| 2 | ಪರಿಶಿಷ್ಟ ಜಾತಿ | NISHA SURESH CHAVHAN |
| 3 | ಪ್ರವರ್ಗ-1 | SACHIN YALLAPPA KHOT |

**ದಿನಾಂಕ: 29-02-2024 ರಿಂದ 01-03-2024 ರ ವರೆಗೆ ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಅಧಿಸೂಚನೆಯಲ್ಲಿನ ಷರತ್ತುಗಳನ್ವಯ ದೈಹಿಕ ತಾಳ್ವಿಕೆ ಪರೀಕ್ಷೆ [Physical Endurance Test], ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ [Physical Efficiency Test] ಹಾಗೂ ದೇಹ ದಾರ್ಢ್ಯತೆ ಪರೀಕ್ಷೆ [Physical Standard Test]ಗಳನ್ನು ಬೆಳಗಾವಿಯಲ್ಲಿ ನಡೆಸಲಾಗುವುದು. ಪರಿಷ್ಕೃತ ಪಟ್ಟಿಯಲ್ಲಿನ ಎಲ್ಲಾ ಅಭ್ಯರ್ಥಿಗಳು ದಿನಾಂಕ: 29-02-2024 ರಂದು ಬೆಳಿಗ್ಗೆ 6.00 ಗಂಟೆಗೆ ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ತಪ್ಪದೇ ಹಾಜರಿರುವುದು.**

**ದಿನಾಂಕ: 27-02-2024**

**ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
**ಹಾಗೂ ಆಯ್ಕೆ ಪ್ರಾಧಿಕಾರ**
**ಬೆಳಗಾವಿ ವೃತ್ತ, ಬೆಳಗಾವಿ**